# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 28.01.2026ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2026ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು:**

| | | |
|---|---|---|
| 1. | ಪ್ರೊ. ಪಿ.ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು |
| 2. | ಡಾ. ಕವಿತಾ ಕೆ.ಆರ್.<br>ಜಂಟಿ ನಿರ್ದೇಶಕರು (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು |
| 3. | ಪ್ರೊ. ಪುಟ್ಟಣ್ಣ<br>ಡೀನರು, ವಾಣಿಜ್ಯ ನಿಕಾಯ | ಸದಸ್ಯರು |
| 4. | ಡಾ. ಎಸ್.ಬಿ.ಎಂ. ಪ್ರಸನ್ನ | ಸದಸ್ಯರು |
| 5. | ಡಾ.ಕೆ.ಸಿ. ಮಹದೇಶ | ಸದಸ್ಯರು |
| 6. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು |
| 7. | ಪ್ರೊ. ಉದಯ ಕುಮಾರ್ ಬಿ. | ಸದಸ್ಯರು |
| 8. | ಶ್ರೀ ನಿತ್ಯಾನಂದ ವಿ. ಗಾಂವಕರ | ಸದಸ್ಯರು |
| 9. | ಶ್ರೀಮತಿ ಶೃತಿ ಶೆಟ್ಟಿ | ಸದಸ್ಯರು |
| 10. | ಶ್ರೀ ಅಲೆಕ್ಸ್ ಐವನ್ ಸಿಕ್ವೇರಾ | ಸದಸ್ಯರು |
| 11. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು (ಆನ್ ಲೈನ್ ಮೂಲಕ) |
| 12. | ಶ್ರೀ ರಘುರಾಜ್ | ಸದಸ್ಯರು |
| 13. | ಶ್ರೀ ಅಚ್ಚುತ ಗಟ್ಟಿ | ಸದಸ್ಯರು |
| 14. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು |

15. ಶ್ರೀಮತಿ ಪುಷ್ಪಲತಾ ಹೆಚ್.ಕೆ. — ಸದಸ್ಯರು
ಪ್ರಾಂಶುಪಾಲರು ಮತ್ತು ಸಹ ನಿರ್ದೇಶಕರು,
ಸರ್ಕಾರಿ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ,
**(ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಆಯುಕ್ತರ ಪರವಾಗಿ)**

16. ಪ್ರೊ. ಹೆಚ್. ದೇವೇಂದ್ರಪ್ಪ — ಸದಸ್ಯರು
ಕುಲಸಚಿವರು (ಪರೀಕ್ಷಾಂಗ)

17. ಶ್ರೀ ಪಂಚಲಿಂಗಸ್ವಾಮಿ, **ಕೆ.ಎಸ್.ಎ.ಎಸ್.,** — ವಿಶೇಷ ಆಹ್ವಾನಿತರು
ಹಣಕಾಸು ಅಧಿಕಾರಿ (ಪ್ರಭಾರ)

18. ಡಾ. ಗಣೇಶ್ ಸಂಜೀವ್ — ಸದಸ್ಯ ಕಾರ್ಯದರ್ಶಿ
ಪ್ರಭಾರ ಕುಲಸಚಿವರು (ಆಡಳಿತ)

**ಅನುಪಸ್ಥಿತರು:**

1. ತಾಂತ್ರಿಕ ಶಿಕ್ಷಣ ನಿರ್ದೇಶಕರು, — ಸದಸ್ಯರು
ಕರ್ನಾಟಕ ಸರ್ಕಾರ
ಬೆಂಗಳೂರು

2. ಶ್ರೀ ಸಿ.ಎ. ನಿತಿನ್ ಜೆ. ಶೆಟ್ಟಿ — ಸದಸ್ಯರು

3. ಡಾ. ಸಂದೇಶ್ ಕೆ.ಎಸ್ — ಸದಸ್ಯರು
(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ)

# ಪ್ರಾರಂಭಿಕ

**ಪ್ರಾರಂಭದಲ್ಲಿ ಕುಲಸಚಿವರು ಹೊಸ ವರ್ಷದಲ್ಲಿ ನಡೆಯುತ್ತಿರುವ ಸಿಂಡಿಕೇಟಿನ ಪ್ರಥಮ ಸಾಮಾನ್ಯ ಸಭೆಗೆ ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸ್ವಾಗತಿಸಿದರು.**

- **ಸಂತಾಪ ಸೂಚಕ ನಿರ್ಣಯ:**

ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿಗಳಾದ **ಪ್ರೊ. ಎಸ್.ಎನ್. ಹೆಗ್ಡೆ (83)** ಇವರು ದಿನಾಂಕ 17.12.2025 ರಂದು ಮೈಸೂರಿನಲ್ಲಿ ನಿಧನರಾಗಿದ್ದು, ಇನ್ನೋರ್ವ ಗಣ್ಯರು ಶಿಕ್ಷಣ ತಜ್ಞರು ಮತ್ತು ನಿಟ್ಟೆ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾಗಿದ್ದ **ಶ್ರೀ ಎನ್. ವಿನಯ ಹೆಗ್ಡೆ** (87) ರವರು ದಿನಾಂಕ 01.01.2026 ರಂದು ನಿಧನರಾಗಿರುತ್ತಾರೆ.

ಈ ಇಬ್ಬರು ಮಹನೀಯರು ಈ ಹಿಂದೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟು ಸದಸ್ಯರಾಗಿ ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದನ್ನು ಸ್ಮರಿಸಲಾಯಿತು. ಈ ಇಬ್ಬರ ನಿಧನಕ್ಕೆ ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ವಿಶ್ವವಿದ್ಯಾನಿಲಯದ ಸಿಂಡಿಕೇಟು ಅತೀವ ಸಂತಾಪಗಳನ್ನು ವ್ಯಕ್ತಪಡಿಸುತ್ತಾ, ಅಗಲಿದ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರುವ ನಿರ್ಣಯವನ್ನು ಅಂಗೀಕರಿಸಲಾಯಿತು.

- **ಸ್ವಾಗತ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 28(1)(ಎಫ್)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ **ಶ್ರೀ ಅಲೆಕ್ಸ್ ಐವನ್ ಸಿಕ್ವೇರಾ**, ಪ್ರಭಾರ ಪ್ರಾಂಶುಪಾಲರು, ಸೆಕ್ರೇಡ್ ಹಾರ್ಟ್ ಕಾಲೇಜು, ಮಡಂತ್ಯಾರು, ಬೆಳ್ತಂಗಡಿ ತಾಲೂಕು ಇವರನ್ನು ಸಿಂಡಿಕೇಟು ಸಭೆಗೆ ಸ್ವಾಗತಿಸಲಾಯಿತು.

# ಪ್ರಾಸ್ತಾವಿಕ

**ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನು ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.**

**ಈ ಕೆಳಗಿನ ವಿಷಯಗಳನ್ನು ಸಭೆಯ ಗಮನಕ್ಕೆ ತರಲಾಯಿತು.**

1. **UI GreenMatric World University Ranking-2025** ನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯವು ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾನಿಲಯಗಳಲ್ಲಿ ಪ್ರಥಮ ಸ್ಥಾನವನ್ನು, ದೇಶದಲ್ಲಿ ತೃತೀಯ ಸ್ಥಾನವನ್ನು ಹಾಗೂ ಪ್ರಪಂಚದಲ್ಲಿ 127ನೇ ಸ್ಥಾನವನ್ನು ಗಳಿಸಿರುವ ಹೆಮ್ಮೆಯ ವಿಷಯವನ್ನು ಸಿಂಡಿಕೇಟ್ ಸಭೆಯ ಗಮನಕ್ಕೆ ತರಲಾಯಿತು. ಈ ಶ್ರೇಯಾಂಕವನ್ನು ದಾಖಲಿಸಲು ವಿಶೇಷ ಆಸಕ್ತಿ ವಹಿಸಿದ IQAC ಘಟಕದ ಪ್ರಯತ್ನವನ್ನು ಶ್ಲಾಘಿಸಲಾಯಿತು.

2. ವಿಶ್ವವಿದ್ಯಾನಿಲಯದ 44ನೇ ವಾರ್ಷಿಕ ಘಟಿಕೋತ್ಸವವನ್ನು ಮಾರ್ಚ್ 2ನೇ ವಾರದಲ್ಲಿ ನಡೆಸಲು ಅನುಕೂಲವಾಗುವಂತೆ ಸೂಕ್ತ ಸಿದ್ಧತೆಗಳನ್ನು ನಡೆಸುವಂತೆ ಘನತೆವೆತ್ತ ಕುಲಾಧಿಪತಿಗಳು ಸೂಚಿಸಿರುವುದಾಗಿ ಹಾಗೂ ಈ ನಿಟ್ಟಿನಲ್ಲಿ ಘಟಿಕೋತ್ಸವದ ಮುಖ್ಯ ಅತಿಥಿಗಳನ್ನು ಆಹ್ವಾನಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಿರುವುದಾಗಿ ಸಭೆಗೆ ತಿಳಿಸಲಾಯಿತು.

3. ಪದವಿ ಹಾಗೂ ಸ್ನಾತಕೋತ್ತರ ತರಗತಿಗಳ ಸೆಮಿಸ್ಟರ್ ಪರೀಕ್ಷೆಗಳು ವ್ಯವಸ್ಥಿತವಾಗಿ ನಡೆಯುತ್ತಿದ್ದು, ತ್ವರಿತವಾಗಿ ಫಲಿತಾಂಶ ಪ್ರಕಟಿಸುವ ನಿಟ್ಟಿನಲ್ಲಿ ಮೌಲ್ಯಮಾಪನ ಕಾರ್ಯವನ್ನು ಪ್ರಾರಂಭಿಸಲಾಗುವುದೆಂದು ಸಭೆಗೆ ತಿಳಿಸಲಾಯಿತು.

4. NAAC Accreditation ಭಾಗವಾಗಿ AQAR ಕ್ರೋಢೀಕೃತ ವರದಿಯನ್ನು ತಯಾರಿಸಿರುವುದಾಗಿ ಸಭೆಗೆ ತಿಳಿಸಲಾಯಿತು.

5. ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ ಸ್ನಾತಕೋತ್ತರ ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ಸವಲತ್ತುಗಳನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಈ ಸಾಲಿನಲ್ಲಿಯೂ ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲದಿಂದ ಭರಿಸಲು ನಿರ್ಣಯಿಸಿರುವ ವಿಷಯವನ್ನು ಸಭೆಯ ಗಮನಕ್ಕೆ ತರಲಾಯಿತು.

6. ಜನವರಿ 20-21, 2026ರಂದು ಬೆಂಗಳೂರಿನಲ್ಲಿ ನಡೆದ ದಕ್ಷಿಣ ವಲಯ ಕುಲಪತಿಗಳ ಸಮ್ಮೇಳನದಲ್ಲಿ ಮಾನ್ಯ ಕುಲಪತಿಯವರು ಭಾಗಿಯಾಗಿ "Education for Increasing Entrepreneurship Mindset in Students" ಎಂಬ ವಿಷಯದ ಬಗ್ಗೆ ಉಪನ್ಯಾಸ ನೀಡಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು.

## I. ಅನುಸರಣಾ ವರದಿಯ ಅನುಮೋದನೆ

**ದಿನಾಂಕ 11.12.2025ರಂದು ನಡೆದ ಸಿಂಡಿಕೇಟಿನ 2025ನೇ ಸಾಲಿನ ಎಂಟನೇ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.**

ಕಾರ್ಯಸೂಚಿ ಸಂಖ್ಯೆ ಸಿಂಡಿಕೇಟು:ಸಾ.ಸ.8:23ಕ್ಕೆ ಸಂಬಂಧಿಸಿ, ಪ್ರಸ್ತುತ 2024-25ನೇ ಸಾಲಿನ ಲೆಕ್ಕಪರಿಶೋಧನೆ ನಡೆಯುತ್ತಿದ್ದು 2023-24ನೇ ಸಾಲಿನ ಲೆಕ್ಕ ಪರಿಶೋಧನೆ ವರದಿಯು ಇನ್ನೂ ವಿಶ್ವವಿದ್ಯಾನಿಲಯಕ್ಕೆ ತಲುಪಿರುವುದಿಲ್ಲ. ಈತನ್ಮಧ್ಯೆ ದಿನಾಂಕ 20.11.2025ರಂದು ನಡೆದ ಅಡ್ವಾಕ್ ಸಭೆಯಲ್ಲಿ ನಿರ್ಣಯಿಸಲಾದಂತೆ 54 ಕಂಡಿಕೆಗಳನ್ನು ನಾನ್ ಅಡ್‌ಹಾಕ್ ಸಭೆಗೆ ಮಂಡಿಸಿ ತೀರುವಳಿಗೊಳಿಸಲು ಸಿದ್ಧತೆ ಮಾಡಿಕೊಳ್ಳಲಾಗಿದ್ದು ಮುಂದಿನ ನಾನ್ ಅಡ್‌ಹಾಕ್ ಸಭೆಯ ತರುವಾಯ 2019-20 ರಿಂದ 2023-24ರವರೆಗಿನ ಎಲ್ಲಾ ಲೆಕ್ಕಪರಿಶೋಧನೆಯ ವರದಿಗಳನ್ನು ಕ್ರೋಢೀಕರಿಸಿ ಡಾ.ಕೆ.ಸಿ.ಮಹದೇಶ ಇವರನ್ನು ಹಣಕಾಸು ಅಧಿಕಾರಿಯವರ ಕಛೇರಿಗೆ ಆಹ್ವಾನಿಸಿ ಲೆಕ್ಕಪರಿಶೋಧನೆಯ ವರದಿಗಳನ್ನು ಪರಿಶೀಲನೆಗೆ ಒದಗಿಸಲಾಗುವುದು.

**- ಉಳಿದಂತೆ ಅನುಮೋದಿಸಲಾಯಿತು –**

## II. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಡಿಸಿ:ಸಾ.ಸ.1:1 (2026) |
| ವಿಷಯ: | ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಹೊಸ ಶಾಶ್ವತ / ಶಾಶ್ವತ ಸಂಯೋಜನೆ ಮುಂದುವರಿಕೆ ಮಂಜೂರು ಮಾಡುವ ಬಗ್ಗೆ. |
| **ನಿರ್ಣಯ:** | ಕಾರ್ಯಸೂಚಿಯಲ್ಲಿರುವ ಕ್ರಮ ಸಂಖ್ಯೆ 1 ರಿಂದ 28 ರವರೆಗೆ ತಿಳಿಸಲಾದ ಕಾಲೇಜುಗಳ ಶಾಶ್ವತ ಸಂಯೋಜನೆ ಮುಂದುವರಿಕೆಗೆ ಹಾಗೂ ಕ್ರಮ ಸಂಖ್ಯೆ 1 ರಿಂದ 11 ರವರೆಗೆ ತಿಳಿಸಲಾದ ಕಾಲೇಜುಗಳ ಹೊಸ ಶಾಶ್ವತ ಸಂಯೋಜನೆಗೆ ಸಂಬಂಧಿಸಿದಂತೆ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿರುವ ಶೈಕ್ಷಣಿಕ ಮಂಡಳಿಯ ಶಿಫಾರಸ್ಸನ್ನು ಸಿಂಡಿಕೇಟು ಅನುಮೋದಿಸಿತು. |

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.1:2 (2026)

ವಿಷಯ: ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಮುಂದುವರಿಕೆ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಕ್ರಮ ಸಂಖ್ಯೆ 1 ರಿಂದ 131 ರವರೆಗೆ ತಿಳಿಸಲಾದ ಕಾಲೇಜುಗಳ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಮುಂದುವರಿಕೆ ಸಂಯೋಜನೆ ನೀಡಬಹುದೆಂಬುದಾಗಿ ಶೈಕ್ಷಣಿಕ ಮಂಡಳಿಯ ಶಿಫಾರಸ್ಸನ್ನು ಸಿಂಡಿಕೇಟು ಅನುಮೋದಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.1:3 (2026)

ವಿಷಯ: ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ವಿಸ್ತರಣಾ ಸಂಯೋಜನೆ (ಹೊಸ ಕಾರ್ಯಕ್ರಮ/ಹೆಚ್ಚುವರಿ ವಿಭಾಗ) ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಕಾರ್ಯಸೂಚಿಯಲ್ಲಿರುವ ಕ್ರಮ ಸಂಖ್ಯೆ 16ರಲ್ಲಿರುವ ಉಡುಪಿ ಕಾಲೇಜ್ ಆಫ್ ಪ್ರೊಫೆಶನಲ್ ಸ್ಟಡೀಸ್, ಶಿವಳ್ಳಿ, ಮಣಿಪಾಲ ಇವರು ಈ ಶೈಕ್ಷಣಿಕ ವರ್ಷದಲ್ಲಿ ಹೆಚ್ಚುವರಿ ವಿಭಾಗವನ್ನು ಪ್ರಾರಂಭಿಸದಿರಲು ನಿರ್ಧರಿಸಿರುವ ಬಗ್ಗೆ ಪತ್ರ ನೀಡಿರುವುದರಿಂದ ಸದರಿ ಕಾಲೇಜ್ ಹೊರತುಪಡಿಸಿ ಉಳಿದ ಕಾಲೇಜುಗಳ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ವಿಸ್ತರಣಾ ಸಂಯೋಜನೆಗೆ (ಹೊಸ ಕಾರ್ಯಕ್ರಮ/ಹೆಚ್ಚುವರಿ ವಿಭಾಗ) ಮಂಜೂರಾತಿ ನೀಡಬಹುದೆಂಬುದಾಗಿ ಶೈಕ್ಷಣಿಕ ಮಂಡಳಿಯ ಶಿಫಾರಸ್ಸನ್ನು ಸಿಂಡಿಕೇಟು ಅನುಮೋದಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.1:4 (2026)

ವಿಷಯ: ಶ್ರೀ ವೆಂಕಟರಮಣ ಮಹಿಳಾ ಕಾಲೇಜು, ಕಾರ್ಕಳ ಎಂಬ ವಿದ್ಯಾಸಂಸ್ಥೆಯ ಹೆಸರು ಬದಲಾವಣೆ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.1:5 (2026)

ವಿಷಯ: ಶಿರ್ಡಿ ಸಾಯಿ ಡಿಗ್ರಿ ಕಾಲೇಜು, ಕಾರ್ಕಳ ಎಂಬ ವಿದ್ಯಾಸಂಸ್ಥೆಯ ಹೆಸರು ಬದಲಾವಣೆ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.1:6 (2026)

ವಿಷಯ: ಶೈಕ್ಷಣಿಕ ವರ್ಷ 2026-27ನೇ ಸಾಲಿನ ಹೊಸ ಕಾಲೇಜುಗಳ ಸಂಯೋಜನೆ ಬಗ್ಗೆ.

**ನಿರ್ಣಯ:** ಪ್ರೆಸ್ಟೀಜ್ ಸ್ಕೂಲ್ ಆಫ್ ಮ್ಯಾನೇಜ್‌ಮೆಂಟ್ ಆಂಡ್ ಇನ್ನೋವೇಶನ್, ಜಪ್ಪಿನಮೊಗರು, ಮಂಗಳೂರು ಇವರು ಹೊಸ ಕಾಲೇಜು ಸ್ಥಾಪನೆಯ ಬಗ್ಗೆ ಕಟ್ಟಡ ಹಾಗೂ ಮೂಲ ಸೌಕರ್ಯ ಹೊಂದಿರುವುದಾಗಿ ತಿಳಿಸಿದ ಹಿನ್ನೆಲೆಯಲ್ಲಿ ಶೈಕ್ಷಣಿಕ ಮಂಡಳಿಯ ಸಭೆಯ ನಂತರ ಇಬ್ಬರು ಡೀನರ ಸಮಿತಿಯು ಸದರಿ ಕಾಲೇಜಿಗೆ ಭೇಟಿ ನೀಡಿ ಪರಿಶೀಲಿಸಿ ನೀಡಿರುವ ವರದಿಯನ್ನು ಶೈಕ್ಷಣಿಕ ಮಂಡಳಿಯ ಘಟನೋತ್ತರ ಅನುಮೋದನೆಯ ನಿರೀಕ್ಷೆಯ ಮೇರೆಗೆ  ಹೊಸ ಕಾಲೇಜುಗಳ ಸಂಯೋಜನೆಗೆ  ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಮಂಜೂರಾತಿ ನೀಡಬಹುದೆಂಬುದಾಗಿ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಸಿಂಡಿಕೇಟಿನಲ್ಲಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.1:7 (2026)

ವಿಷಯ: ಹಾರ್ವರ್ಡ್ ಇನ್ಸ್ಟಿಟ್ಯೂಟ್ ಆಫ್ ಫೈರ್ ಅಂಡ್ ಸೇಫ್ಟಿ ಇಂಜಿನಿಯರಿಂಗ್, ಕಂಕನಾಡಿ, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ.

**ನಿರ್ಣಯ:** ಸದರಿ ಕಾಲೇಜಿನ ಸ್ಥಳ ಬದಲಾವಣೆಗೆ ಸಂಬಂಧಿಸಿದಂತೆ ಕಟ್ಟಡ ಸುರಕ್ಷತೆ / ಅಗ್ನಿ ಸುರಕ್ಷತೆ/ಭೂ ದಾಖಲೆ/30 ವರ್ಷಗಳ ಅವಧಿಗೆ ಸಬ್ ರಿಜಿಸ್ಟ್ರಾರ್ ಕಛೇರಿಯಿಂದ ದೃಢೀಕರಿಸಲ್ಪಟ್ಟ ಲೀಸ್ ಡೀಡ್ ದಾಖಲೆಗಳನ್ನು 31ನೇ ಜನವರಿ 2026 ರೊಳಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸದಿದ್ದಲ್ಲಿ ಸರ್ಕಾರದ ಆದೇಶದಂತೆ ವಿಶ್ವವಿದ್ಯಾನಿಲಯದ ಹಂತದಲ್ಲಿಯೇ ಪ್ರಸ್ತಾವನೆಯನ್ನು ತಿರಸ್ಕರಿಸುವ ಶೈಕ್ಷಣಿಕ ಮಂಡಳಿ ನಿರ್ಣಯವನ್ನು ಸಿಂಡಿಕೇಟಿನಲ್ಲಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.1:8 (2026)

ವಿಷಯ: ಹೊಸ ಪಿಹೆಚ್.ಡಿ. ಕಾರ್ಯಕ್ರಮದ ಕುರಿತು ಚರ್ಚೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಹಣಕಾಸು:ಸಾ.ಸ.1:9 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2026-27ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2025-26ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ.

**ನಿರ್ಣಯ:** ವಿಸ್ತೃತವಾದ ಚರ್ಚೆಯ ನಂತರ ಅನುಮೋದಿಸಲಾಯಿತು. ಮುಂದಿನ ಸಾಲಿನಲ್ಲಿ ವಿಶ್ವವಿದ್ಯಾನಿಲಯದ ಬಜೆಟ್ ಮಂಡನೆಗಾಗಿ ಸಿಂಡಿಕೇಟಿನ ವಿಶೇಷ ಸಭೆ ಕರೆದು ಚರ್ಚಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಹಣಕಾಸು:ಸಾ.ಸ.1:10 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ವಿಭಾಗದಲ್ಲಿನ ಲೆಕ್ಕಪತ್ರಗಳನ್ನು Double Entry System ಗೆ ಪರಿವರ್ತಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.1:11 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕರ ನೇಮಕಾತಿ ಕುರಿತು ರಚಿಸಿದ ಕರಡು ಮಾರ್ಗಸೂಚಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಸಾ.ಸ.1:12 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ಘಟಕ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಭದ್ರತಾ ವ್ಯವಸ್ಥೆ ಒದಗಿಸುವ ಗುತ್ತಿಗೆ ಸಂಸ್ಥೆಯ ಅವಧಿ ಮುಂದುವರಿಸುವ ಬಗ್ಗೆ.

**ನಿರ್ಣಯ:** ಹೊಸ ಟೆಂಡರು ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ವಿಸ್ತರಿಸುವ ಪ್ರಸ್ತಾವನೆಯನ್ನು ಒಪ್ಪಲಾಯಿತು. ಹೊಸ ಟೆಂಡರು ಪ್ರಕ್ರಿಯೆಯನ್ನು ಆದ್ಯತೆಯ ನೆಲೆಯಲ್ಲಿ ತುರ್ತಾಗಿ ನಿರ್ವಹಿಸುವಂತೆ ಸಂಬಂಧಪಟ್ಟವರಿಗೆ ಸೂಚಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ:ಸಾ.ಸ.1:13 (2026)

ವಿಷಯ: ದಿನಾಂಕ 01-07-2025ರವರೆಗಿನ ಬಿ.ಎ./ಬಿ.ಎಸ್ಸಿ./ಬಿ.ಕಾಂ./ಬಿ.ಎಸ್.ಡಬ್ಲ್ಯೂ/ ಬಿ.ಎಡ್./ಬಿ.ಎ.(ಹೆಚ್.ಆರ್.ಡಿ.)/ಬಿ.ಬಿ.ಎ./ಬಿ.ಹೆಚ್.ಎಂ.ಬಿ.ಎಸ್ಸಿ.(ಹೆಚ್.ಎಸ್.)/ ಬಿ.ಸಿ.ಎ./ ಬಿ.ಎಸ್ಸಿ.(ಫ್ಯಾಷನ್ ಡಿಸೈನ್) / ಬಿ.ಎಸ್ಸಿ. (ಇಂಟೀರಿಯರ್ ಡಿಸೈನ್ & ಡೆಕೊರೇಶನ್) / ಬಿ.ಪಿ.ಎಡ್. / ಬಿ.ಎಸ್ಸಿ.(ಎಫ್.ಎನ್.ಡಿ.)/ಬಿ.ಎ.ಎಸ್.ಎಲ್.ಪಿ. ಇತ್ಯಾದಿ ಪದವಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಅಧ್ಯಾಪಕರ ಜೇಷ್ಠತಾ ಪಟ್ಟಿ ಅನುಮೋದನೆ ಕುರಿತು.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.1:14 (2026)

ವಿಷಯ: ಸ್ನಾತಕೋತ್ತರ ಇತಿಹಾಸ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಇತಿಹಾಸ ಅಧ್ಯಯನ ಮಂಡಳಿಯ ಪುನರ್ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.1:15 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಾಣಿಜ್ಯ ವಿಭಾಗಕ್ಕೆ ಬದಲಿ ಅಧ್ಯಕ್ಷರನ್ನು ನೇಮಕಾತಿ ಮಾಡಿದ ಕುರಿತು ಘಟನೋತ್ತರ ಅನುಮೋದನೆ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.1:16 (2026)

ವಿಷಯ: ಡಾ. ಕಿಶೋರಿ ಪಿ. ನಾರಾಯಣ್‌ಕರ್, ಸಹಾಯಕ ಪ್ರಾಧ್ಯಾಪಕರು, ಗಣಿತಶಾಸ್ತ್ರ ವಿಭಾಗ, ಇವರಿಗೆ ಸಹಾಯಕ ಪ್ರಾಧ್ಯಾಪಕ ಹಂತ 3 ಗೆ ನೀಡಿರುವ ಪದೋನ್ನತಿ ದಿನಾಂಕವನ್ನು ಪರಿಷ್ಕರಿಸುವುದಕ್ಕೆ ಸಂಬಂಧಿಸಿ ಸ್ಕ್ರೀನಿಂಗ್–ಕಂ-ಇವ್ಯಾಲ್ಯುವೇಶನ್ ಸಮಿತಿ ಸಭೆಯ ನಡವಳಿಯನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.1:17 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದಲ್ಲಿ ಸಹಾಯಕ ದೈಹಿಕ ಶಿಕ್ಷಣ ನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿರುವ ಡಾ.ಪ್ರಸನ್ನ ಬಿ.ಕೆ. ಇವರನ್ನು ಅಂತರ್ ವಿಶ್ವವಿದ್ಯಾನಿಲಯದ ವರ್ಗಾವಣೆಯಡಿಯಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸುವ ಕುರಿತು.

**ನಿರ್ಣಯ:** ಮುಂದಿನ ಸಿಂಡಿಕೇಟು ಸಭೆಗೆ ಕಾರ್ಯಸೂಚಿಯನ್ನು ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.1:18 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಾಗರ ಭೂವಿಜ್ಞಾನ ವಿಭಾಗದಲ್ಲಿ ಸಹಾಯಕ ಪ್ರಾಧ್ಯಪಕರಾಗಿ ಕಾರ್ಯ ನಿರ್ವಹಿಸುತ್ತಿರುವ ಡಾ. ನಿರ್ಮಲ ಆರ್., ಇವರನ್ನು ಅಂತರ್ ವಿಶ್ವವಿದ್ಯಾನಿಲಯದ ವರ್ಗಾವಣೆಯಡಿಯಲ್ಲಿ ಮೈಸೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸುವ ಕುರಿತು.

**ನಿರ್ಣಯ:** ಮುಂದಿನ ಸಿಂಡಿಕೇಟು ಸಭೆಗೆ ಕಾರ್ಯಸೂಚಿ ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.1:19 (2026)

ವಿಷಯ: ಡಾ.ಜೆ.ಜಿ. ಮಂಜುನಾಥ, ಸಹಾಯಕ ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗ, ಎಫ್.ಎಂ.ಕೆ.ಎಂ.ಸಿ. ಕಾಲೇಜು, ಮಡಿಕೇರಿ ಇವರಿಗೆ Visiting Professor ಆಗಿ Brazil ಇಲ್ಲಿಗೆ ಭೇಟಿ ನೀಡಲು ಅನುಮತಿ ನೀಡಿರುವುದಕ್ಕೆ ಘಟನೋತ್ತರ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.1:20(2026)

ವಿಷಯ: IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ನವೆಂಬರ್ 2025ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ.

**ನಿರ್ಣಯ:** ಅವಗಾಹಿಸಲಾಯಿತು. IQAC ವಿಭಾಗದ ಕೆಲಸ ಕಾರ್ಯಗಳ ಬಗ್ಗೆ ಮಾನ್ಯ ಸಿಂಡಿಕೇಟು ಸಭೆಯು ಒಕ್ಕೊರೊಲಿನಿಂದ ಶ್ಲಾಘಿಸಿ IQAC ನಿರ್ದೇಶಕರು ಸೇರಿದಂತೆ ಎಲ್ಲಾ ಸಿಬ್ಬಂದಿಗಳ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.1:21(2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Association of Chartered Certified Accounts (ACCA), London ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.1:22(2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Mentors for Kids Foundation, Bangalore ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

**ನಿರ್ಣಯ:** ಕಾರ್ಯಸೂಚಿಯನ್ನು ಕೈಬಿಡಲು ನಿರ್ಧರಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಸಾ.ಸ.1:23(2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜಾದ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸಿದ ಸಿಬ್ಬಂದಿಗಳ ವೇತನ ವ್ಯತ್ಯಾಸದ ಬಾಕಿ ಮೊತ್ತಕ್ಕೆ ಘಟನೋತ್ತರ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.1:24(2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯಕ್ಕೆ ನಿರ್ದೇಶಕರನ್ನು ನೇಮಕ ಮಾಡಿದ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.1:25 (2026)

ವಿಷಯ: ಡಾ.ಎಸ್.ಬಿ.ಎಂ. ಪ್ರಸನ್ನ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.

**ವಿಷಯ 1 :** ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.8:2(2025) ರ ವಿಷಯದಂತೆ, ಸಂಯೋಜಿತ ಕಾಲೇಜುಗಳ ಆಡಳಿತ ಮಂಡಳಿ / ಸಲಹಾ ಮಂಡಳಿಗೆ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರನ್ನು ನಾಮ ನಿರ್ದೇಶನಗೊಳಿಸುವ ಬಗ್ಗೆ ತೆಗೆದುಕೊಂಡ ನಿರ್ಣಯದಂತೆ ತಯಾರಿಸಿರುವ ಪಟ್ಟಿಯನ್ನು ಸಿಂಡಿಕೇಟ್ ಸಭೆಯಲ್ಲಿ ಮಂಡಿಸುವುದು. ಏಕೆಂದರೆ, ಕಳೆದ ಎರಡು ಶೈಕ್ಷಣಿಕ

ವರ್ಷದಿಂದಲೂ ಕುಲಪತಿಗಳು ಯಾವ ಸಿಂಡಿಕೇಟ್ ಸದಸ್ಯರನ್ನು ನೇಮಕ ಮಾಡದೆ ವಿಳಂಬ ಮಾಡಿರುವುದು ವಿ.ವಿ.ಯ ಪ್ರಾತಿನಿಧ್ಯತೆಯನ್ನು ನಾವು ಬಿಟ್ಟುಕೊಟ್ಟಂತಾಗುತ್ತದೆ. ಹಾಗಾಗಿ ಆದ್ಯತೆಯ ಮೇರೆಗೆ ಪಟ್ಟಿಯನ್ನು ತಯಾರಿಸಿ ಸಭೆಗೆ ಮಂಡಿಸುವುದು.

**ನಿರ್ಣಯ:** ಮಾಹಿತಿ ನೀಡಲಾಯಿತು.

**ವಿಷಯ 2 :** ಹಣಕಾಸು ವರ್ಷ 2019-2020, 2020-2021, 2021-2022, 2022-2023, 2023-2024ನೇ ಸಾಲಿನ ಲೆಕ್ಕ ಪರಿಶೋಧನೆ ಆಕ್ಷೇಪಣೆಗಳನ್ನು ಹಾಗೂ ಅದರ ವಸೂಲಾತಿ ವರದಿಗಳನ್ನು ಸಿಂಡಿಕೇಟ್ ಸಭೆಯಲ್ಲಿ ಮಂಡನೆ ಮಾಡಿ ಚರ್ಚಿಸಿ ನಿರ್ಧರಿಸುವುದು.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.1:26 (2026)

ವಿಷಯ: **ಶ್ರೀ ಅಚ್ಚುತ ಗಟ್ಟಿ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.**

**ವಿಷಯ 1 :** ತಾ. 3.12.2025ರಂದು ಕೊಣಾಜೆ ಗ್ರಾಮ ಪಂಚಾಯತ್ ಕಛೇರಿ ಬಳಿಯ ವಿಶ್ವವಿದ್ಯಾನಿಲಯದ ಆಟದ ಮೈದಾನದಲ್ಲಿ ಗುರು ಗಾಂಧಿ ಶತಮಾನೋತ್ಸವ ಸಂವಾದ ಐತಿಹಾಸಿಕ ಕಾರ್ಯಕ್ರಮ ನಡೆದಿರುವುದರಿಂದ ಈ ಮೈದಾನಕ್ಕೆ ಗುರು ಗಾಂಧಿ ಮೈದಾನವೆಂದು ನಾಮಕರಣ ಮಾಡಬೇಕೆಂದು ಕರ್ನಾಟಕ ಸರಕಾರದ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಸಭಾಧ್ಯಕ್ಷರಾದ ಯು.ಟಿ.ಖಾದರ್ ರವರು ಸಭೆಯಲ್ಲಿ ಘೋಷಣೆ ಮಾಡಿರುವುದರಿಂದ ಸಿಂಡಿಕೇಟ್ ಸಭೆಯಲ್ಲಿ ಅನುಮೋದನೆ ನೀಡುವುದಕ್ಕಾಗಿ ಪ್ರಸ್ತಾವನೆ.

**ನಿರ್ಣಯ:** "ಬ್ರಹ್ಮಶ್ರೀ ನಾರಾಯಣ ಗುರು - ಗಾಂಧೀಜಿ ಸಂವಾದ ಶತಮಾನೋತ್ಸವ ಮೈದಾನ" ಎಂದು ನಾಮಕರಣವನ್ನು ಮಾಡಲು ಸೂಕ್ತ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

**ವಿಷಯ 2 :** ಮಂಗಳೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಬಿ.ಎಡ್. ಕಾಲೇಜು ವಿದ್ಯಾರ್ಥಿಗಳಿಗೆ ಕಳೆದ 8 ವರ್ಷಗಳಿಂದ ಅಂತರ್ ಕಾಲೇಜು ಕ್ರೀಡಾ ಕೂಟ ನಡೆಸದಿರುವುದರಿಂದ ಬಿ.ಎಡ್. ವಿದ್ಯಾರ್ಥಿಗಳು ಕ್ರೀಡೆಯಿಂದ ವಂಚಿತರಾಗಿರುತ್ತಾರೆ. ಮುಂದಿನ ಶೈಕ್ಷಣಿಕ ವರ್ಷದಿಂದ ಬಿ.ಎಡ್. ವಿದ್ಯಾರ್ಥಿಗಳಿಗೂ ಕ್ರೀಡಾಕೂಟವನ್ನು ನಡೆಸಬೇಕಾಗಿ ಪ್ರಸ್ತಾವನೆ.

**ನಿರ್ಣಯ:** ಬಿ.ಎಡ್. ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಕ್ರೀಡಾ ವೇಳಾಪಟ್ಟಿಯನ್ನು ತಯಾರಿಸುವ ಬಗ್ಗೆ ಬಿ.ಎಡ್. ಕಾಲೇಜುಗಳ ಪ್ರಾಂಶುಪಾಲರುಗಳೊಂದಿಗೆ ಚರ್ಚಿಸಿ ನಿರ್ಣಯ ತಿಳಿಸಲು ಮಾನ್ಯ ಸಿಂಡಿಕೇಟು ಸದಸ್ಯರಾದ ಪ್ರೊ. ಉದಯ ಕುಮಾರ್ ರವರನ್ನು ಕೋರಲಾಯಿತು.

**ವಿಷಯ 3 :** ಮಂಗಳೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಕಾಲೇಜುಗಳಲ್ಲಿ ತಾತ್ಕಾಲಿಕ ಸಿಬ್ಬಂದಿಗಳಿಗೆ ಪಿ.ಎಫ್. ಮತ್ತು ಇ.ಎಸ್.ಐ. ಸೌಲಭ್ಯವನ್ನು ನೀಡುವಂತೆ ಮಂಗಳೂರು ವಿಶ್ವವಿದ್ಯಾನಿಲಯದ ತಾತ್ಕಾಲಿಕ ಸಿಬ್ಬಂದಿಗಳಿಗೂ ಪಿ.ಎಫ್. ಮತ್ತು ಇ.ಎಸ್.ಐ. ಸೌಲಭ್ಯವನ್ನು ಒದಗಿಸಬೇಕು. ಈಗಾಗಲೇ ಗುತ್ತಿಗೆ ನೌಕರರಿಗೆ ಸೌಲಭ್ಯ ನೀಡುತ್ತಿರುವುದರಿಂದ ತಾತ್ಕಾಲಿಕ ಸಿಬ್ಬಂದಿಗಳಿಗೂ ಅವಕಾಶ ಕಲ್ಪಿಸಬೇಕಾಗಿ ಪ್ರಸ್ತಾವನೆ.

**ನಿರ್ಣಯ:** ಚರ್ಚಿಸಲಾಯಿತು. ತಾತ್ಕಾಲಿಕ ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡುವ ಸಂದರ್ಭದಲ್ಲಿ ಪರಿಗಣಿಸಲು ನಿರ್ಣಯಿಸಲಾಯಿತು.

**ವಿಷಯ 4 :** ಕೊಣಾಜೆ ಗ್ರಾಮದಲ್ಲಿರುವ ವಿಶ್ವಮಂಗಳ ಆಂಗ್ಲಮಾಧ್ಯಮ ಶಾಲೆ ನಡೆಸಲು ಹಾಗೂ ಆಟದ ಮೈದಾನಕ್ಕೆ ಜಾಗ ನೀಡಿ ಯಾವುದೇ ಶುಲ್ಕ ಪಡೆಯುವುದಿಲ್ಲ. ಕೊಣಾಜೆ ಗ್ರಾಮವನ್ನು ದತ್ತು ಸ್ವೀಕಾರ ಮಾಡಿ ಕೊಣಾಜೆ ಗ್ರಾಮದ ಯುವಕರಿಗೆ ಆಟೋಟಗಳಿಗೆ ವಿಶ್ವವಿದ್ಯಾನಿಲಯಕ್ಕೆ ಶುಲ್ಕ ನೀಡಿ ಪರವಾನಿಗೆ ಪಡೆಯಬೇಕೆಂಬ ನಿಯಮ ಮಾಡಲಾಗಿದೆ. ಈ ಬಗ್ಗೆ ಪ್ರಸ್ತಾವನೆ.

**ನಿರ್ಣಯ:** ಕ್ರೀಡಾ ಚಟುವಟಿಕೆಗಳಿಗೆ ವಿಶ್ವವಿದ್ಯಾನಿಲಯದ ಮೈದಾನ ಬಳಕೆಗೆ ಶುಲ್ಕ ಪಡೆದುಕೊಂಡು ಪರವಾನಿಗೆಯನ್ನು ಪಡೆದುಕೊಳ್ಳಬೇಕೆಂದು ನಿರ್ಣಯಿಸಲಾಯಿತು. ಕೊಣಾಜೆ ಗ್ರಾಮದ ಸದಸ್ಯರಿಂದ ನಡೆಯುವ ಕ್ರೀಡಾ ಚಟುವಟಿಕೆಗಳಿಗೆ ಶುಲ್ಕದಲ್ಲಿ ರಿಯಾಯಿತಿ ನೀಡುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.1:27 (2026)

ವಿಷಯ: ಶ್ರೀ ರಘುರಾಜ್, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.

**ವಿಷಯ 1 :** ಮಂಗಳೂರು ವಿಶ್ವವಿದ್ಯಾನಿಲಯ ಕ್ಯಾಂಪಸ್‌ನಲ್ಲಿರುವ ಖಾಯಂ ಉಪನ್ಯಾಸಕ ಹುದ್ದೆಯ ಒಟ್ಟು ಸಂಖ್ಯೆ, ಇದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ

ಖಾಯಂ ಉಪನ್ಯಾಸಕರ ಒಟ್ಟು ಸಂಖ್ಯೆ, ಕ್ಯಾಂಪಸ್‌ನಲ್ಲಿರುವ ಅತಿಥಿ ಉಪನ್ಯಾಸಕರ ಒಟ್ಟು ಸಂಖ್ಯೆ ಇವೆಲ್ಲದರ ಮಾಹಿತಿ ನೀಡುವುದು. ಕ್ಯಾಂಪಸ್‌ನಲ್ಲಿ ಪ್ರಸ್ತುತ ಡಾಕ್ಟರೇಟ್ ಸಂಶೋಧನೆ ನಡೆಸುತ್ತಿರುವವರ ಒಟ್ಟು ಸಂಖ್ಯೆ, 2025ರಲ್ಲಿ ಪಿಹೆಚ್.ಡಿ. ಸಂಶೋಧನೆ ಮಾಡಲು ಅರ್ಜಿ ಹಾಕಿದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ, ಇದರಲ್ಲಿ ಪಿಹೆಚ್.ಡಿ. ಸಂಶೋಧನೆಗೆ ಆಯ್ಕೆಯಾದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ, ಮಂಗಳೂರು ವಿಶ್ವವಿದ್ಯಾನಿಲಯ ಕಾಲೇಜು, ಹಂಪನಕಟ್ಟೆ ಇಲ್ಲಿ ಖಾಯಂ ಆಗಿ ಕರ್ತವ್ಯ ನಿರ್ವಹಿಸುತ್ತಿರುವ ವಿಷಯವಾರು ಖಾಯಂ ಉಪನ್ಯಾಸಕರ ಪಟ್ಟಿ ಮತ್ತು ಅವರ ಅಧೀನದಲ್ಲಿ ಸಂಶೋಧನೆ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯ ಮಾಹಿತಿ.

ಈ ಎಲ್ಲಾ ಪೂರ್ಣ ಮಾಹಿತಿಯ ಜೊತೆಗೆ ಕಳೆದ ಸಿಂಡಿಕೇಟ್ ಸಭೆಯಲ್ಲಿ ನಿರ್ಣಯಿಸಿದಂತೆ ಪದವಿ ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಿರಿಯ ಉಪನ್ಯಾಸಕರಿಗೆ ಮಾರ್ಗದರ್ಶಕರಾಗಿ ನೇಮಿಸುವ ಬಗ್ಗೆ ಸರ್ಕಾರದ ಹಂತದಲ್ಲಿ ಕೈಗೊಂಡ ಕ್ರಮಗಳ ಚರ್ಚಿಸಿ ನಿರ್ಣಯ ಕೈಗೊಳ್ಳುವುದು.

**ನಿರ್ಣಯ:** ವಿಶ್ವವಿದ್ಯಾನಿಲಯ ಮತ್ತು ಘಟಕ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕರು ಎಷ್ಟು ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುತ್ತಿದ್ದಾರೆ ಎಂಬ ಬಗ್ಗೆ ಮಾಹಿತಿ ಹಾಗೂ ಮಾರ್ಗದರ್ಶನ ನೀಡದಿದ್ದಲ್ಲಿ ಅಂತಹ ಬೋಧಕರ profile ನೊಂದಿಗೆ ಕಾರಣವನ್ನು ಏಳು ದಿನಗಳೊಳಗಾಗಿ ಪಡೆದು ಶೈಕ್ಷಣಿಕ ವಿಭಾಗದಿಂದ ಮುಂದಿನ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

**ವಿಷಯ 2 :** ವಿಶ್ವವಿದ್ಯಾನಿಲಯದ ಅಭಿವೃದ್ಧಿ ಹಾಗೂ ವಿದ್ಯಾರ್ಥಿಗಳ ಪ್ರಗತಿಗಾಗಿ ಅನುದಾನ ತರುವಲ್ಲಿ ಸರ್ಕಾರದ ಜೊತೆ ಬೇಡಿಕೆ ನೀಡಿದ ಮಾಹಿತಿ ಇದ್ದಲ್ಲಿ ಮಂಡಿಸಿ ಚರ್ಚಿಸುವುದು. ಕಳೆದ 2 ವರ್ಷದಲ್ಲಿ ಸಮಾಜ ಸೇವೆಗಾಗಿ ಗೌರವ ಡಾಕ್ಟರೇಟ್ ಪಡೆದ 6 ಜನ ಸಮಾಜ ಸೇವಕರಲ್ಲಿ ವಿಶ್ವವಿದ್ಯಾನಿಲಯದ ಅಭಿವೃದ್ಧಿಗಾಗಿ ಬೇಡಿಕೆಯ ಮನವಿ ನೀಡಿದ್ದಲ್ಲಿ ಅದರ ಪತ್ರದ ಮಾಹಿತಿ ಹಾಗೂ ಮುಂದಿನ ನಡೆಯ ಬಗ್ಗೆ ಚರ್ಚಿಸುವುದು ಮತ್ತು ಜಿಲ್ಲೆಯ ಜನಪ್ರತಿನಿಧಿಗಳ ಜೊತೆಗೆ ಒಂದು ವಿಶೇಷ ಸಭೆ ಆಯೋಜಿಸಲು ದಿನಾಂಕ ನಿಗದಿಗೊಳಿಸಲು ಚರ್ಚಿಸುವುದು.

**ನಿರ್ಣಯ:** ಪ್ರಸ್ತಾವನೆಯನ್ನು ಕೈಬಿಡಲು ನಿರ್ಣಯಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಇಡಿ:ಸಾ.ಸ.1:28 (2026) |
| ವಿಷಯ: | ಅಭಿವೃದ್ಧಿ ಅನುದಾನದಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ ಆಡಳಿತ ಸೌಧ ಕಟ್ಟಡದಲ್ಲಿ Ladies rest room ವ್ಯವಸ್ಥೆಗೊಳಿಸುವ ಕಾಮಗಾರಿ ಹಾಗೂ Front desk renovation ಕಾಮಗಾರಿ and providing and laying cement concrete paver to the quadrangle area of S.V.P. Kannada Department at Mangalore University Campus - ಪರಿಷ್ಕೃತ ಪ್ಯಾಕೇಜ್ ಟೆಂಡರು ಮೊತ್ತದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಇಡಿ:ಸಾ.ಸ.1:29 (2026) |
| ವಿಷಯ: | PM-USHA ಅನುದಾನದಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ವಿಜ್ಞಾನ ಸಂಕೀರ್ಣ ಕಟ್ಟಡದ ಎರಡನೇ ಅಂತಸ್ತಿನಲ್ಲಿರುವ ಯು.ಆರ್.ರಾವ್ ಸಭಾಂಗಣದ ನವೀಕರಣ ಕಾಮಗಾರಿ -ಅಂದಾಜುಪಟ್ಟಿಯ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು ಹಾಗೂ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಿ ಅನುಮೋದನೆ ನೀಡುವಾಗ ಎಚ್ಚರಿಕೆ ವಹಿಸುವಂತೆ ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಇಡಿ:ಸಾ.ಸ.1:30(2026) |
| ವಿಷಯ: | ಲೆಕ್ಕ ಶೀರ್ಷಿಕೆ ಸಂಖ್ಯೆ "1405" (ವಿದ್ಯುತ್ ವೆಚ್ಚಗಳು) ರಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ವಿವಿಧ ವಿಭಾಗಗಳ ಕಟ್ಟಡಗಳ ಮೇಲ್ಚಾವಣಿಗಳ ಮೇಲೆ ಆಳವಡಿಸಲಾಗಿರುವ Solar Roof Top Photo Voltic Project (SRTP) ನಲ್ಲಿ Solar Power generation ಗೆ ಸಂಬಂಧಿಸಿದಂತೆ ಹಳೆಯ ಬಾಕಿ ಬಿಲ್ಲುಗಳ ಪಾವತಿ ಬಗ್ಗೆ (2021 ರಿಂದ 2024ರ ಅವಧಿ). |
| **ನಿರ್ಣಯ:** | ಈಗಾಗಲೇ ದಿನಾಂಕ 15.11.2024ರ ಸಿಂಡಿಕೇಟ್ ಸಭೆಯಲ್ಲಿ ಅನುಮೋದನೆಗೊಂಡಿರುವ ಒಟ್ಟು ಮೊತ್ತಕ್ಕೆ (ರೂ.65,26,402/-) ಹೆಚ್ಚುವರಿಯಾಗಿ ತಡವಾಗಿ ಸ್ವೀಕೃತಗೊಂಡಿರುವ ಎರಡು ಮಾಸಿಕ ಬಿಲ್ಲುಗಳ ಒಟ್ಟು ಮೊತ್ತ ರೂ.2,84,799/- ಪಾವತಿಸಲು ಸಿಂಡಿಕೇಟು ಸಭೆಯು ಅನುಮೋದನೆ ನೀಡಿತು. |

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.1:31 (2026)

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ಆಟದ ಮೈದಾನದ ಬದಿಯಲ್ಲಿ RCC drain ಮತ್ತು ಕಾಂಕ್ರೀಟ್ ಗೋಡೆ ನಿರ್ಮಿಸುವುದು-ಅಂದಾಜುಪಟ್ಟಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಸದರಿ ದುರಸ್ಥಿ ಕಾಮಗಾರಿಯನ್ನು ಆದ್ಯತೆಯ ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲದಿಂದ ಕೈಗೊಳ್ಳಲು ಸಿಂಡಿಕೇಟು ಅನುಮೋದಿಸಿತು.

ಕಾರ್ಯಸೂಚಿ ಸಂಖ್ಯೆ ಡಿಇವಿ:ಸಾ.ಸ.1:32(2026)

ವಿಷಯ: IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಡಿಸೆಂಬರ್ 2025ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ.

**ನಿರ್ಣಯ:** ಮುಖ್ಯಾಂಶದ ವರದಿಯನ್ನು ಅವಗಾಹಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ:ಸಾ.ಸ.1:33(2026)

ವಿಷಯ: ಪಿಎಂ-ಉಷಾ ಯೋಜನೆಯ ವಿಶ್ವವಿದ್ಯಾನಿಲಯದ ಬಲವರ್ಧನೆಗೆ ಅನುದಾನದ Soft Component ಅಡಿಯಲ್ಲಿ ಕಾರ್ಯಕ್ರಮಗಳನ್ನು ನಡೆಸುವ ಸಲುವಾಗಿ ತಯಾರಿಸಲಾದ ಪ್ರಮಾಣಿತ ಕಾರ್ಯಾಚರಣೆಯ ವಿಧಾನ (SOP) ಕರಡು ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪ.ಜಾ.ಪ.ಪಂ.ಘಟಕ:ಸಾ.ಸ.1:34(2026)

ವಿಷಯ: ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ ಘಟಕದಿಂದ ವಿವಿಧ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಪ್ರವೇಶಾತಿ ಪಡೆದ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ ಸ್ನಾತಕೋತ್ತರ ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ SCP/TSP ಅನುದಾನದಿಂದ ನೀಡಲಾಗುತ್ತಿರುವ ಸವಲತ್ತುಗಳನ್ನು ಸ್ಥಾಯಿ ಸಮಿತಿ ಸಭೆಯು ಪರಿಷ್ಕರಿಸಿದ ಶಿಫಾರಸ್ಸನ್ನು ಅನುಮೋದಿಸುವ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು. ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ರಘುರಾಜ್ ಇವರನ್ನು ಸ್ಥಾಯಿ ಸಮಿತಿಗೆ ಸೇರಿಸಿಕೊಳ್ಳುವ ಬಗ್ಗೆ ಪರಿಶೀಲಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.1:35(2026)

ವಿಷಯ: 2024-25ನೇ ಸಾಲಿನ ಮಂಗಳೂರು ವಿಶ್ವವಿದ್ಯಾನಿಲಯದ AQAR ಕ್ರೋಢೀಕೃತ ವರದಿಯನ್ನು ಸಿಂಡಿಕೇಟು ಸಭೆಯ ಅವಗಾಹನೆಗೆ ಮಂಡಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.1:36(2026)

ವಿಷಯ: ಮುಖ್ಯ ಛಾಯಾಗ್ರಾಹಕ ಹುದ್ದೆಯ ಸೃಜನೆಗೆ ಸಂಬಂಧಿಸಿದ ಕರಡು ಪರಿನಿಯಮದ ಅನುಮೋದನೆ ಬಗ್ಗೆ - ಕರಡು ಪರಿನಿಯಮದಲ್ಲಿ ಸರ್ಕಾರದ ನಿರ್ದೇಶನಗಳನ್ನು ಅಳವಡಿಸುವ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.1:37(2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮಂಜೂರಾಗಿರುವ ಪ್ರಯೋಗಾಲಯ ಸಹಾಯಕ ಹುದ್ದೆಗಳಿಂದ ಶೇಕಡ 30 ಹುದ್ದೆಗಳನು ಹಿರಿಯ ಪ್ರಯೋಗಾಲಯ ಸಹಾಯಕ ಹುದ್ದೆಯನ್ನಾಗಿ ಪರಿವರ್ತಿಸುವ ಬಗ್ಗೆ - ಕರಡು ಪರಿನಿಯಮದಲ್ಲಿ ಸರ್ಕಾರದ ನಿರ್ದೇಶನಗಳನ್ನು ಅಳವಡಿಸುವ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

**ಇತರೆ ವಿಷಯಗಳು:**

1) ಅಮ್ಮೆಂಬಳ ಬಾಳಪ್ಪ ಅವರ ಜನ್ಮದಿನವನ್ನು ಆಚರಿಸುವ ಬಗ್ಗೆ ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ಸುರೇಶ್ ಕುಮಾರ್ ನಾವೂರು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಲು ನಿರ್ಣಯಿಸಲಾಯಿತು.

2) ಸರ್ಕಾರ ನೀಡಿರುವ ಅನುಮೋದನೆಯಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶಾಸನಬದ್ಧ ಅಧಿಕಾರಿಗಳ ಪ್ರಯಾಣಕ್ಕೆ ಸಂಬಂಧಿಸಿದ ಹೊಸ ಇನ್ನೋವಾ ವಾಹನ ಹಾಗೂ ಪರೀಕ್ಷಾ ಕಾರ್ಯ / ವಿದ್ಯಾರ್ಥಿಗಳ ಉಪಯೋಗಕ್ಕೆ ಒಂದು ಟೆಂಪೋ ಟ್ರಾವೆಲ್ಲರ್ ವಾಹನವನ್ನು ಖರೀದಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

3) ವಿಶ್ವವಿದ್ಯಾನಿಲಯದ ನಿವೃತ್ತ ನೌಕರರಿಗೆ ಪಿಂಚಣಿ ನೀಡುವ ಸಲುವಾಗಿ ರಾಜ್ಯ ಸರ್ಕಾರದಿಂದ ರೂ.15.00 ಕೋಟಿ ಅನುದಾನ ಬಿಡುಗಡೆಯಾಗಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು. ಲೋಕಾಯುಕ್ತ ಕೇಸ್ ಹಾಗೂ ನ್ಯಾಯಾಲಯದಲ್ಲಿರುವ ಪ್ರಕರಣಗಳನ್ನು ಹೊರತುಪಡಿಸಿ ಉಳಿದವರಿಗೆ ನಿವೃತ್ತಿ ಸೌಲಭ್ಯಗಳನ್ನು ನೀಡಲು ನಿರ್ಣಯಿಸಲಾಯಿತು. ನಿವೃತ್ತರಿಗೆ ಪಾವತಿಸಿದ ಮೊತ್ತದ ವಿವರಗಳನ್ನು ಮುಂದಿನ ಸಭೆಯಲ್ಲಿ ಮಾಹಿತಿಗೆ ನೀಡಲು ಹಣಕಾಸು ಅಧಿಕಾರಿಯವರಿಗೆ ಸೂಚಿಸಲಾಯಿತು.

4) ತುಳು ಭಾಷೆಯನ್ನು ಬೆಳೆಸುವ ನೆಲೆಯಲ್ಲಿ ಊರಿನ ಹಿರಿಯರು ಹಾಗೂ ತುಳು ವಿದ್ವಾಂಸರನ್ನೊಳಗೊಂಡ ಪರಿಣಿತರ ಸಭೆಯನ್ನು 2026 ರ ಫೆಬ್ರವರಿ ತಿಂಗಳಲ್ಲಿ ಕರೆಯುವಂತೆ ನಿರ್ಣಯಿಸಲಾಯಿತು. ಈ ಸಭೆ ನಿಗದಿಗೊಂಡಿರುವ ಮಾಹಿತಿಯನ್ನು ಮಾನ್ಯ ಸಿಂಡಿಕೇಟ್ ಸದಸ್ಯರಾದ ಶ್ರೀ ರಘುರಾಜ್ ರವರಿಗೂ ನೀಡಲು ನಿರ್ಣಯಿಸಲಾಯಿತು.

5) ಎಂ.ಎ. ತುಳು ವಿಭಾಗ ಪ್ರಾರಂಭಿಸುವ ನಿಟ್ಟಿನಲ್ಲಿ ವಿಶ್ವವಿದ್ಯಾನಿಲಯವು ಸರ್ಕಾರದ ಅನುಮೋದನೆಗಾಗಿ ಈಗಾಗಲೇ ಸಲ್ಲಿಸಿರುವ ಪರಿನಿಯಮ ಪತ್ರದ ಪ್ರತಿಯನ್ನು ಸರ್ಕಾರದಿಂದ ಹಾಗೂ ಮಾನ್ಯ ಕುಲಾಧಿಪತಿಗಳಿಂದ ನಾಮನಿರ್ದೇಶನಗೊಂಡಿರುವ ಸಿಂಡಿಕೇಟು ಸದಸ್ಯರಿಗೆ ನೀಡಲು ನಿರ್ಣಯಿಸಲಾಯಿತು.

6) ಬೆಳಪು ಕೇಂದ್ರದಲ್ಲಿ ರಾಜ್ಯ ಸರ್ಕಾರವು ಗಾಂಧಿ ಸಂಶೋಧನ ಕೇಂದ್ರ ಸ್ಥಾಪಿಸುವ ಪ್ರಸ್ತಾವನೆಯ ಬಗ್ಗೆ ಸದರಿ ಕೇಂದ್ರವನ್ನು ಸರ್ಕಾರಕ್ಕೆ ಹಸ್ತಾಂತರಿಸುವ ಕುರಿತು ಮಾನ್ಯ ಸಿಂಡಿಕೇಟ್ ಸದಸ್ಯರಾದ ಡಾ. ಕೆ.ಸಿ. ಮಹದೇಶ ರವರು ಆಕ್ಷೇಪ ವ್ಯಕ್ತಪಡಿಸಿದರು. ಸದರಿ ಕೇಂದ್ರದಲ್ಲಿ ವಿಶ್ವವಿದ್ಯಾನಿಲಯದ ವತಿಯಿಂದ ಇಂಜಿನಿಯರಿಂಗ್ ಕಾಲೇಜು ಸ್ಥಾಪಿಸುವ ಬಗ್ಗೆ ಪರಿಶೀಲಿಸುವಂತೆ ಮನವಿ ಮಾಡಿದರು. ಪ್ರಸ್ತುತ ವಿಶ್ವವಿದ್ಯಾನಿಲಯದ ಆರ್ಥಿಕ ಪರಿಸ್ಥಿತಿಯಿಂದ ವಿಶ್ವವಿದ್ಯಾನಿಲಯದ ವತಿಯಿಂದ ಇಂಜಿನಿಯರಿಂಗ್ ಕಾಲೇಜು ಸ್ಥಾಪಿಸಲು ಸಾಧ್ಯವಿಲ್ಲದಿರುವುದನ್ನು ಸಭೆಗೆ ತಿಳಿಸಲಾಯಿತು. ಸದರಿ ಕೇಂದ್ರದಲ್ಲಿ ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸುವಂತೆ ಈ ಹಿಂದೆ ಮಾನ್ಯ ಮುಖ್ಯಮಂತ್ರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಅಳವಡಿಸಿರುವ ವಿಷಯವನ್ನು ಸಭೆಗೆ ತಿಳಿಸಲಾಯಿತು.

7) ವಿಶ್ವವಿದ್ಯಾನಿಲಯದ ಜಮೀನಿನ ಗಡಿಯನ್ನು ಗುರುತಿಸುವ ನಿಟ್ಟಿನಲ್ಲಿ ಡ್ರೋಣ್ ಸರ್ವೆ ಕಾರ್ಯವನ್ನು ಪ್ರಾರಂಭಿಸಲು ನಿರ್ಣಯಿಸಲಾಯಿತು.

8) ಲೆಕ್ಕ ಪರಿಶೋಧಕರ ಆಕ್ಷೇಪದ ಹಿನ್ನಲೆಯಲ್ಲಿ ವಿಶ್ವವಿದ್ಯಾನಿಲಯದ ಬೋಧಕರಿಗೆ ಹೆಚ್ಚುವರಿಯಾಗಿ ನೀಡಲಾಗಿದ್ದ ಮೊತ್ತದ ವಸೂಲಾತಿಯ ವಿವರವನ್ನು ಮಾನ್ಯ ಸಿಂಡಿಕೇಟ್ ಸದಸ್ಯರಿಗೆ ಒದಗಿಸಲಾಯಿತು.

**ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಯವರು** |